## ಮುಖ್ಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಯಾದಗಿರಿ

## ಸಿ.ಸಿ. ನಂ. 711 / 2022

ಸಿಡಬ್ಲ್ಯೂ- 6
ಪಿಡಬ್ಲ್ಯೂ- 7

ದಿನಾಂಕಃ **06.06.2026.**

ಸಾಕ್ಷಿಗೆ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು

| | | |
|---|---|---|
| ಸಾಕ್ಷಿಯ ಹೆಸರುಃ | - | ಮಲ್ಲಿಕಾರ್ಜುನ |
| ತಂದೆಯ/ಗಂಡನ ಹೆಸರುಃ | - | ಹಣಮಂತ್ರಾಯ |
| ವಯಸ್ಸುಃ | - | **51** ವರ್ಷ |
| ಉದ್ಯೋಗಃ | - | ಒಕ್ಕಲುತನ. |
| ವಾಸಸ್ಥಳಃ | - | ಬೋಂರಗಿ. |

ಮುಖ್ಯ ವಿಚಾರಣೆಃ ಸ.ಸ.ಅ. ರವರಿಂದಃ

ಚಾಸಾ-7 ರವರ ಪರಿಚಯ ನನಗೆ ಇರುತ್ತದೆ. 1 ನೇ ಆರೋಪಿತನ ಪರಿಚಯ ನನಗೆ ಇರುವುದಿಲ್ಲ. ಸಾಕ್ಷಿಯು ತಾನು ಸಹಿ ಮಾಡಿದ ದಾಖಲೆಯನ್ನು ನೋಡಿ ಗುರುತಿಸಿದ್ದು. ಸದರಿ ದಾಖಲೆಯು ವಾಹನಗಳ ಜಪ್ತಿ ಪಂಚನಾಮೆಯಾಗಿರುತ್ತದೆ ಆದ್ದರಿಂದ ವಾಹನಗಳ ಜಪ್ತಿಪಂಚನಾಮೆಗಳನ್ನು ಅದನ್ನು ನಿಪಿ 10 ಎಂದು ಗುರುತಿಸಲಾಯಿತು. ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ 10(ಎ) ಎಂದು ಗುರುತಿಸಲಾಯಿತು. ನಿಪಿ 10 ರಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿರುವುದಿಲ್ಲ. ಕಳೆದ 2-3 ವರ್ಷಗಳ ಹಿಂದೆ ನಾನು ಪೊಲೀಸ್ ಠಾಣೆಗೆ ಹೋದಾಗ ಪೊಲೀಸರು ನಿಪಿ 10 ರ ಮೇಲೆ ನನ್ನ ಸಹಿಯನ್ನು ಪಡೆದುಕೊಂಡಿದರು. ನಿಪಿ 10 ರ ಮೇಲೆ ಏಕೆ ಪೊಲೀಸರು ಸಹಿಯನ್ನು ಪಡೆದುಕೊಂಡಿದರು ಎಂದು ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯು 7 ಪೋಟೋಗಳನ್ನು ನೋಡಿ ಗುರುತಿಸಿದ್ದು ಎರಡು ಭಾವಚಿತ್ರಗಳಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿರುತ್ತಾರೆ ಆದ್ದರಿಂದ ಅವುಗಳನ್ನು ಕ್ರಮವಾಗಿ ನಿಪಿ 11 ರಿಂದ 17 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲಕರ ಸಾಕ್ಷ್ಯವನ್ನು ನುಡಿದ ಕಾರಣ ಸ.ಸ.ಅಭಿಯೋಜಕರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. )

ಪಾಟೀ ಸವಾಲುಃ ಸ.ಸ.ಅ ರವರಿಂದಃ

ದಿನಾಂಕಃ 10.04.2022 ರಂದು ಮದ್ಯಾಹ್ನ 2-00 ರಿಂದ 3-00 ವರೇಗೆ ನನ್ನನ್ನು ಹಾಗೂ ಚಾಸಾ-7 ರವರನ್ನು ಪೊಲೀಸರು ಠಾಣೆಗೆ ಕರೆದು ನಮ್ಮ ಸಮಕ್ಷಮ ಸದರಿ ವಾಹನಗಳ

ಜಪ್ತಿಪಂಚನಾಮೆಯನ್ನು ಮಾಡಿ 1 ನೇ ಆರೋಪಿತನ ಬಳಿಯಿಂದ ಲಾರಿಯನ್ನು ಜಪ್ತಿಪಡಿಸಿಕೊಂಡು ಫೋಟೋಗಳನ್ನು ತೆಗೆದಿದ್ದರು ಎಂದರೆ ಸರಿಯಲ್ಲ. ಜಪ್ತಿ ಪಂಚನಾಮೆಯ ವಿಷಯಗಳನ್ನು ಪೊಲೀಸರು ನನಗೆ ತಿಳಿಸಿದರು ಎಂದರೆ ಸರಿಯಲ್ಲ. ಆರೋಪಿತನೊಂದಿಗೆ ರಾಜೀ ಮಾಡಿಕೊಂಡು ಜಪ್ತಿಪಂಚನಾಮೆಯನ್ನು ಮಾಡಿರುವುದಿಲ್ಲ ಎಂದು ನಾನು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ 1 ನೇ ಆರೋಪಿ ಪರ ವಕೀಲರಾದ ಶ್ರೀ.ಎಂ.ಎಸ್.ಕೆ. ರವರಿಂದಃ

1 ನೇ ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

<u>ಮರು ವಿಚಾರಣೆಃ ಇಲ್ಲಃ</u>

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚುಗಾರನಿಂದ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಅದೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು,
ಯಾದಗಿರಿ.